ಕರ್ನಾಟಕ ಸರಕಾರ

ವಾರ್ತಾ ಇಲಾಖೆ

ನಂ.17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ ಬೆಂಗಳೂರು 560 001. ದೂ. 080-22028032/34/ಫ್ಯಾಕ್ಸ್ 22028041

ದಿನಾಂಕ: 26-12-2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | **22nd National Children's Science Congress-2014:**<br>**Inauguration:**<br>**Shri Siddaramaiah, Chief Minister of Karnataka.**<br>**Chief Guest:**<br>**Dr. Harsh Vardhan, Minister of Science and Technology and Earth Science, Govt. of India.**<br>**Keynote Address:**<br>**Bharat Ratna Prof. C.N.R. Rao, National Research Professor**<br>**Preside:**<br>**Shri S.R. Patil, Minister of Science and Technology, Govt. of Karnataka.**<br>**Note:- Vechicle will be arranged from Press Club, Cubbon Park, Bengaluru at 9-45 AM .**<br>**Contact:**<br>**Shri T.G. Premakumar,**<br>**Mob No. 9448588352** | 27-12-2014<br>**Saturady at 10.30 AM** | **SJB Auditorium, SJB Institute of Techonology BGS Health and Education, City Campus, Kengeri, Bengaluru-560 060** |

ನಿರ್ದೇಶಕರ ಪರವಾಗಿ

**ಪತ್ರಿಕಾ ಪ್ರಕಟಣೆ**

# ಡಾ. ವಿಷ್ಣುವರ್ಧನ್ ಸ್ಮಾರಕ ಶಂಕುಸ್ಥಾಪನೆ

ಬೆಂಗಳೂರು, ಡಿಸೆಂಬರ್ 26 (ಕರ್ನಾಟಕ ವಾರ್ತೆ)

ಡಾ. ವಿಷ್ಣುವರ್ಧನ್ ಪ್ರತಿಷ್ಠಾನದ ವತಿಯಿಂದ ಡಿಸೆಂಬರ್ 30 ರಂದು ಬೆಳಗ್ಗೆ 10.00 ಗಂಟೆಗೆ ಬೆಂಗಳೂರಿನ ಕೆಂಗೇರಿ ಬಳಿಯ ಮೈಲಸಂದ್ರ ಗ್ರಾಮದ ಡಾ. ವಿಷ್ಣುವರ್ಧನ್ ಮುಖ್ಯರಸ್ತೆಯಲ್ಲಿ ಡಾ.ವಿಷ್ಣುವರ್ಧನ್ ಸ್ಮಾರಕದ ಶಂಕುಸ್ಥಾಪನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಡಾ. ವಿಷ್ಣುವರ್ಧನ್ ಸ್ಮಾರಕದ ಶಂಕುಸ್ಥಾಪನೆಯನ್ನು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ನೆರವೇರಿಸುವರು. ಸಮಾರಂಭದ ಅಧ್ಯಕ್ಷತೆಯನ್ನು ಶಾಸಕ ಶ್ರೀ ಎಸ್.ಟಿ. ಸೋಮಶೇಖರ್ ಅವರು ವಹಿಸುವರು. ಸಮಾರಂಭದ ಮುಖ್ಯ ಅತಿಥಿಗಳಾಗಿ ಕೇಂದ್ರದ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಶ್ರೀ ಡಿ.ವಿ. ಸದಾನಂದ ಗೌಡ, ವಿಧಾನ ಪರಿಷತ್ ಸಭಾಪತಿ ಶ್ರೀ ಡಿ.ಹೆಚ್. ಶಂಕರಮೂರ್ತಿ, ವಿಧಾನಸಭಾಧ್ಯಕ್ಷ ಶ್ರೀ ಕಾಗೋಡು ತಿಮ್ಮಪ್ಪ, ಸಾರಿಗೆ ಸಚಿವ ಶ್ರೀ ರಾಮಲಿಂಗಾರೆಡ್ಡಿ, ಕಂದಾಯ ಸಚಿವ ಶ್ರೀ ವಿ. ಶ್ರೀನಿವಾಸ ಪ್ರಸಾದ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಮತ್ತು ಹಜ್ ಸಚಿವ ಶ್ರೀ ಆರ್. ರೋಷನ್ ಬೇಗ್, ವಸತಿ ಸಚಿವ ಶ್ರೀ ಹೆಚ್. ಅಂಬರೀಶ್, ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವೆ ಶ್ರೀಮತಿ ಉಮಾಶ್ರೀ, ಖ್ಯಾತ ಚಲನಚಿತ್ರ ನಟಿ ಶ್ರೀಮತಿ ಭಾರತಿ ವಿಷ್ಣುವರ್ಧನ್, ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಶ್ರೀ ರಾಜೇಂದ್ರಸಿಂಗ್ ಬಾಬು, ಶ್ರೀ ಕಂಠೀರವ ಸ್ಟುಡಿಯೋದ ಅಧ್ಯಕ್ಷರಾದ ಶ್ರೀಮತಿ ವಿಜಯಲಕ್ಷ್ಮೀ ಅರಸ್, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಶ್ರೀ ಥಾಮಸ್ ಡಿಸೋಜಾ, ವಿಧಾನಸಭೆಯ ವಿರೋಧ ಪಕ್ಷದ ನಾಯಕರಾದ ಶ್ರೀ ಜಗದೀಶ್ ಶೆಟ್ಟರ, ಬೆಂಗಳೂರು ಮಹಾಪೌರರಾದ ಶ್ರೀಮತಿ ಶಾಂತಕುಮಾರಿ, ಕರ್ನಾಟಕ ಚಲನಚಿತ್ರ ನಿರ್ಮಾಪಕರ ಸಂಘದ ಅಧ್ಯಕ್ಷ ಹಾಗೂ ಶಾಸಕ ಶ್ರೀ ಮುನಿರತ್ನ, ಲೋಕಸಭಾ ಸದಸ್ಯ ಶ್ರೀ ಡಿ.ಕೆ. ಸುರೇಶ್, ರಾಜ್ಯಸಭಾ ಸದಸ್ಯೆ ಡಾ. ಬಿ. ಜಯಶ್ರೀ, ಅವರು ಸೇರಿದಂತೆ ಅನೇಕ ಗಣ್ಯರು ಪಾಲ್ಗೊಳ್ಳಲಿದ್ದಾರೆ.

ಬಾಬು:ಜಿಪಿಆರ್.

# ಅಧಿಕ ಭಾರದ ಸಾಗಾಣಿಕೆ ನಿಯಂತ್ರಣಕ್ಕೆ ಸಾರಿಗೆ ಇಲಾಖೆ ಕ್ರಮ

ಬೆಂಗಳೂರು, ಡಿಸೆಂಬರ್ 26 (ಕರ್ನಾಟಕ ವಾರ್ತೆ)

ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಅಧಿಕ ಭಾರ ಹಾಕಿಕೊಂಡು ಸರಕು ಸಾಗಣೆ ವಾಹನಗಳು ಸಂಚರಿಸುತ್ತಿರುವುದರಿಂದ ರಸ್ತೆಗಳು ಹಾಳಾಗುತ್ತಿರುವುದಲ್ಲದೆ ರಸ್ತೆ ಸುಧಾರಣೆಗೆ ಹಾಗೂ ದುರಸ್ತಿಗೆ ತೊಂದರೆ ಉಂಟಾಗುತ್ತದೆ. ಅಲ್ಲದೆ, ಇತರೆ ವಾಹನಗಳ ಸುಗಮ ಸಂಚಾರಕ್ಕೂ ಅಡ್ಡಿಯಾಗುತ್ತದೆ. ರಸ್ತೆಗಳು ಹಾಳಾಗುವುದರಿಂದ ಅಪಘಾತಗಳ ಪ್ರಮಾಣವೂ ಹೆಚ್ಚಾಗುತ್ತಿದೆ. ಇದರಿಂದಾಗಿ ಸರಕು ಸಾಗಣೆ ವಾಹನಗಳಲ್ಲಿ ಅಧಿಕ ಭಾರ ಸಾಗಾಣೆಯನ್ನು ನಿಯಂತ್ರಿಸುವುದು ಅತ್ಯಗತ್ಯವಾಗಿದೆ.

ಮೋಟಾರು ವಾಹನ ಕಾಯ್ದೆ ನೋಂದಣಿ ಪುಸ್ತಕದಲ್ಲಿ ಗೊತ್ತುಪಡಿಸಿದ ಹೇರು ಭಾರವನ್ನು ಮಾತ್ರ ಸಾಗಿಸಲು ಅವಕಾಶವಿರುತ್ತದೆ. ನಿಗದಿಪಡಿಸಿದ ಸಾಮರ್ಥ್ಯಕ್ಕಿಂತ ಹೆಚ್ಚಿನ ತೂಕದ ಸರಕು ಸಾಗಿಸುವುದನ್ನು ತನಿಖಾ ಸಿಬ್ಬಂದಿಯವರು ಗಮನಿಸಿದಲ್ಲಿ ಕಾಯ್ದೆಯ ಪ್ರಕಾರ ಕ್ರಮ ಅನುಸರಿಸಿ ಹೆಚ್ಚು ಭಾರವನ್ನು ವಾಹನ ಚಾಲಕರ ಜವಾಬ್ದಾರಿಯಲ್ಲಿಯೇ ಸ್ಥಳದಲ್ಲೇ ಇಳಿಸಲು ವಾಹನ ಚಾಲಕರಿಗೆ ಸೂಚನೆ ನೀಡಲು ಮತ್ತು ಹೆಚ್ಚುವರಿ ಭಾರದ ಸರಕನ್ನು ಇಳಿಸಿದ ನಂತರವೇ ವಾಹನವು ನಿಗದಿತ ತೂಕ ಸರಕನ್ನು

ಹೊಂದಿದೆ ಎಂದು ಖಾತರಿಪಡಿಸಿಕೊಂಡ ನಂತರವೇ ವಾಹನವನ್ನು ಮುಂದೆ ಸಂಚರಿಸಲು ಅವಕಾಶ ನೀಡಲಾಗುತ್ತಿದೆ. ಈ ದಿಸೆಯಲ್ಲಿ ಸರ್ವೋಚ್ಛ ನ್ಯಾಯಾಲಯವು ದಿನಾಂಕ: **9–11–2005** ರಲ್ಲಿ ನೀಡಿದ ಆದೇಶದ ಮೇರೆಗೆ ಅಧಿಕ ಭಾರ ಸಾಗಾಣಿಕೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಸಾರಿಗೆ ಇಲಾಖೆಯಿಂದ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತದೆ.

ಅಲ್ಲದೆ, ವಾಹನ ಮಾಲೀಕರು ಅಧಿಕ ಭಾರವನ್ನು ಕೊಂಡೊಯ್ಯದೆ ಕಾನೂನು ಪ್ರಕಾರ ನಿಗದಿತ ಪ್ರಮಾಣದ ಸರಕನ್ನು ಮಾತ್ರ ಸಾಗಿಸಿದಲ್ಲಿ ಅಧಿಕ ಭಾರ ಸಾಗಣೆಯ ಪ್ರಶ್ನೆ ಉದ್ಭವಿಸುವುದಿಲ್ಲ. ಇದರಿಂದಾಗಿ ರಸ್ತೆಗಳು ಹಾಳಾಗುವುದನ್ನು ತಪ್ಪಿಸಲು ಸಾಧ್ಯವಾಗುವುದಲ್ಲದೆ ಹೆದ್ದಾರಿಗಳಲ್ಲಿ ಸುಗಮ ಸಂಚಾರಕ್ಕೆ ಅನುಕೂಲವಾಗುತ್ತದೆ.

ನಿಯಮಬಾಹಿರವಾಗಿ ಅಧಿಕ ಭಾರ ಸಾಗಣೆ ಮಾಡುವ ಮೂಲಕ ಎಸಗುವ ಮೋಟಾರು ವಾಹನ ಕಾಯ್ದೆ ಮತ್ತು ನಿಯಮಗಳ ಉಲ್ಲಂಘನೆಯ ಅಪರಾಧಕ್ಕೆ ವಾಹನ ಮಾಲೀಕರು/ಚಾಲಕರು ಅಪರಾಧಿಗಳಾಗುವಂತೆ ವಾಹನಗಳಲ್ಲಿ ಅಧಿಕ ಭಾರ ಸಾಗಣೆ ಮಾಡಲು ಸರಕು ನೀಡುವ ವ್ಯಕ್ತಿಗಳು/ಸಂಸ್ಥೆಗಳೂ ಮತ್ತು ಆಧಿಕ ಭಾರವನ್ನು ಸ್ವೀಕರಿಸುವ/ಸಂಸ್ಥೆಗಳು ಸಹ ಕಾನೂನು ಕ್ರಮಕ್ಕೆ ಒಳಪಡಬೇಕಾಗುತ್ತದೆ. ಸರ್ವೋಚ್ಛ ನ್ಯಾಯಾಲಯದ ಆದೇಶದಂತೆ ಸರಕು ಸಾಗಣೆ ವಾಹನಗಳಲ್ಲಿ ನಿಯಮಬಾಹಿರವಾಗಿ ಅಧಿಕ ಭಾರ ಸಾಗಣೆ ಮಾಡಿದ ಪ್ರಕರಣಗಳಲ್ಲಿ ವಾಹನ ಮಾಲೀಕರು/ಚಾಲಕರು ಕಾನೂನು ಕ್ರಮಕ್ಕೆ ಒಳಪಡುವುದಲ್ಲದೆ, ವಾಹನಗಳಲ್ಲಿ ಅಧಿಕ ಭಾರ ಸಾಗಾಣಿಕೆಗೆ ಅವಕಾಶ ನೀಡುವ ವ್ಯಕ್ತಿಗಳು/ಸಂಸ್ಥೆಗಳು ಮತ್ತು ಅಧಿಕ ಭಾರದ ಸರಕನ್ನು ಸ್ವೀಕರಿಸುವ ವ್ಯಕ್ತಿಗಳು/ಸಂಸ್ಥೆಗಳ ವಿರುದ್ಧವೂ ಸಹ ಕಾನೂನಿನ ಕ್ರಮ ತೆಗೆದುಕೊಳ್ಳಲಾಗುವುದು. ಆದ್ದರಿಂದ, ಅಧಿಕ ಭಾರದ ಸರಕನ್ನು ಸಾಗಣೆ ಮಾಡಲು ಅವಕಾಶ ನೀಡದಂತೆ ಸಾರಿಗೆ ಇಲಾಖೆ ತಿಳಿಸಿದೆ.

ಬಾಬು:ಜಿಪಿಆರ್.